OS 22/2020

PW-01

ದಿನಾಂಕಃ 06-06-2023 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ:- ವಾದಿಯ ಪರ ವಕೀಲರಿಂದ:-

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ವಂಶವೃಕ್ಷವನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿಪಿ.1 ಎಂದು, ಹದಿಮೂರು ಪಹಣಿಗಳನ್ನು ಹಾಜರುಪಡಿಸುತ್ತಿದ್ದು, ಅವುಗಳನ್ನು ಕ್ರಮವಾಗಿ ನಿಪಿ.2 ರಿಂದ 14 ಎಂದು, ಮುಟೇಷನ್ ರಿಜಿಸ್ಟರ್ ಹಾಜರುಪಡಿಸುತ್ತಿದ್ದು, ಅದನ್ನು ನಿಪಿ.15 ಎಂದು, ಒಂದು ಗಣಕೀಕೃತ ಪಹಣಿಯನ್ನು ಹಾಜರುಪಡಿಸುತ್ತಿದ್ದು, ಅವುಗಳನ್ನು ಕ್ರಮವಾಗಿ ನಿಪಿ.16 ಎಂದು, ದಿಃ 03-08-2018 ರ ವಿಭಾಗ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿಪಿ.17 ಎಂದು, ದೃಡೀಕೃತ ಕಚ್ಚಾ ನಕಾಶೆಯನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿಪಿ.18 ಎಂದು, ದೃಡೀಕೃತ ನಕಲಿನ ಆಕಾರಬಂಧಿ ಹಾಜರುಪಡಿಸುತ್ತಿದ್ದು, ಅದನ್ನು ನಿಪಿ.19 ಎಂದು, ತಹಶೀಲ್ದಾರರ ಕಾರ್ಯಲಯ ನ್ಯಾಮತಿ ತಾಲೂಕು ನ್ಯಾಮತಿರವರು ನೀಡಿದ ಹಿಂಬರಹವನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿಪಿ.20 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶಕೋರಿದ್ದು, ನೀಡಿ ಮುಂದೂಡಲಾಯಿತು.

(ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಹೊನ್ನಾಳಿ.